ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2275
ಮಾನ್ಯ ಸದಸ್ಯರ ಹೆಸರು	:	ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	:	21-03-2022
ಉತ್ತರಿಸುವ ಸಚಿವರು	:	ಪ್ರವಾಸೋದ್ಯಮ, ಜೀವಿಶಾಸ್ತ್ರ, ಹಾಗೂ ಪರಿಸರ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಕರ್ನಾಟಕ ಕಾಶ್ಮೀರವೆಂದೇ ಖ್ಯಾತಿ ಪಡೆದ ಕೊಡಗು ಜಿಲ್ಲೆಯಲ್ಲಿ ಪರಿಸರ ಸ್ನೇಹಿ ಹಾಗೂ ಸುಸ್ಥಿರ ಪ್ರವಾಸೋದ್ಯಮದ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಹಾಗೂ ರೂಪಿಸಿರುವ ಪ್ರವಾಸಿಸ್ನೇಹಿ ಯೋಜನೆಗಳೇನು;	ಕರ್ನಾಟಕ ಪ್ರವಾಸೋದ್ಯಮ ನೀತಿ 2020-26ರ ಅಡಿಯಲ್ಲಿ ರಾಜ್ಯದಲ್ಲಿ ಗುರುತಿಸಲಾದ ಪ್ರವಾಸಿ ತಾಣಗಳಲ್ಲಿ ಪ್ರವಾಸೋದ್ಯಮ ಯೋಜನೆಗಳಲ್ಲಿ ಪರಿಸರ ಸ್ನೇಹಿ ಹಾಗೂ ಸುಸ್ಥಿರ ಪ್ರವಾಸೋದ್ಯಮ ಉಪಕ್ರಮಗಳನ್ನು ಅಳವಡಿಸಿಕೊಂಡಿರುವ ಹಾಗೂ ಇಲಾಖೆಯಲ್ಲಿ ನೋಂದಾಯಿತವಾಗಿರುವ ಸಂಸ್ಥೆಗಳಿಗೆ ಈ ಕೆಳಕಂಡಂತೆ ಆರ್ಥಿಕ ನೆರವನ್ನು ನೀಡಲು ಪ್ರಸ್ತಾಪಿಸಲಾಗಿದೆ.

ಕ್ರಮ ಸಂಖ್ಯೆ	ಕ್ರಮ	ಆರ್ಥಿಕ ನೆರವು	ಪ್ರತಿ ಪ್ರವಾಸೋದ್ಯಮ ಯೋಜನೆಯ ಸಹಾಯಧನಕ್ಕೆ ಸಂಬಂಧಿಸಿದ ಗರಿಷ್ಠ ಮೊತ್ತ
1	ಜಲ ಸಂರಕ್ಷಣೆ ಮತ್ತು ಮಳೆ ನೀರು ಸಂಗ್ರಹ	ಕ್ರಮ ಕೈಗೊಳ್ಳುವುದಕ್ಕಾಗಿ ಶೇ.50 ರಷ್ಟು	ರೂ.1.00 ಲಕ್ಷ
2	ನವೀಕರಿಸಬಹುದಾದ ಇಂಧನ ಮೂಲಗಳ ಅಳವಡಿಕೆ	ಕ್ರಮ ಕೈಗೊಳ್ಳುವುದಕ್ಕಾಗಿ ಶೇ.50 ರಷ್ಟು	ರೂ.1.00 ಲಕ್ಷ
3	ಮಾಲಿನ್ಯ ನಿಯಂತ್ರಣ ಕ್ರಮಗಳ ಅಳವಡಿಕೆ	ಕ್ರಮ ಕೈಗೊಳ್ಳುವುದಕ್ಕಾಗಿ ಶೇ.50 ರಷ್ಟು	ರೂ.1.00 ಲಕ್ಷ

ಕ್ರ. ಸಂ.	ಪ್ರಶ್ನೆ	ಉತ್ತರ
ಆ)	ಕೊಡಗು ಜಿಲ್ಲೆಯಲ್ಲಿ "ಹೆಲಿ ಟ್ಯೂರಿಸಂ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆಯೇ; ಅನುಷ್ಠಾನಗೊಳಿಸುತ್ತಿದ್ದಲ್ಲಿ, ಜಿಲ್ಲೆಯ ಎಷ್ಟು ಪ್ರವಾಸಿ ತಾಣಗಳನ್ನು "ಹೆಲಿ ಟ್ಯೂರಿಸಂ" ಯೋಜನೆಯಡಿ ಪರಿಗಣಿಸಲಾಗಿದೆ;	ಹೌದು, ಕರ್ನಾಟಕ ರಾಜ್ಯದಲ್ಲಿ ಹೆಲಿ-ಟೂರಿಸಂ ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಬಂಧ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ (ಕೆ.ಎಸ್.ಟಿ.ಡಿ.ಸಿ.)ವನ್ನು ನೋಡಲ್ ಏಜೆನ್ಸಿಯಾಗಿ ನಿಯೋಜಿಸಲಾಗಿದ್ದು, ಕೆ.ಎಸ್.ಟಿ.ಡಿ.ಸಿ. ಮೂಲಕ ಹೆಲಿಕಾಪ್ಟರ್ ಸೇವಾ ಪೂರೈಕೆದಾರರಾದ ತುಂಬಿ ಏವಿಯೇಷನ್ ಪ್ರೈವೇಟ್ ಲಿಮಿಟೆಡ್ ಮತ್ತು ಚಿಪ್ಸನ್ ಏವಿಯೇಷನ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆಯವರೊಂದಿಗೆ ಜನವರಿ-2022 ರಲ್ಲಿ ಒಪ್ಪಂದ ಮಾಡಿಕೊಳ್ಳಲಾಗಿರುತ್ತದೆ. ಸದರಿ ಯೋಜನೆಯಲ್ಲಿ ಕೊಡಗು ಜಿಲ್ಲೆಯ ಪ್ರಮುಖ ಪ್ರವಾಸಿ ಸ್ಥಳಗಳನ್ನು ಒಳಗೊಂಡಂತೆ ಸರ್ಕ್ಯೂಟ್ ರಚಿಸಲು ಹೆಲಿ-ಟೂರಿಸಂ ಸೇವಾ ಪೂರೈಕೆದಾರರಿಗೆ ತಿಳಿಸಲಾಗಿರುತ್ತದೆ.
ಇ)	ಜಿಲ್ಲೆಯಲ್ಲಿ, ಸದರಿ ಯೋಜನೆಯಡಿ ಪರಿಗಣಿಸಿರುವ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಇದುವರೆಗೆ ಸರ್ಕಾರ ನೀಡಿರುವ ಅನುದಾನ ಎಷ್ಟು; ಹಾಗೂ ಕೈಗೊಂಡಿರುವ ಕಾಮಗಾರಿಗಳೆಷ್ಟು? (ವಿವರ ನೀಡುವುದು)	ಸದರಿ ಯೋಜನೆಗೆ ಇಲಾಖೆಯಿಂದ ಇದುವರೆಗೂ ಯಾವುದೇ ಅನುದಾನ ನೀಡಿರುವುದಿಲ್ಲ.

TOR 144 TDV 2022

(ಆನಂದ್ ಸಿಂಗ್)
ಪ್ರವಾಸೋದ್ಯಮ, ಜೀವಿಶಾಸ್ತ್ರ,
ಹಾಗೂ ಪರಿಸರ ಸಚಿವರು